www.varthabharati.in

ಜನದನಿಯ ಸಾರಥಿ

epaper.varthabharati.in

# ವಾರ್ತಾ ಭಾರತಿ

ಮಂಗಳೂರು ಮತ್ತು ಬೆಂಗಳೂರಿನಿಂದ ಪ್ರಕಟಿತ

26 ಎಪ್ರಿಲ್ 2017
ಬುಧವಾರ

VARTHABHARATHI KANNADA DAILY

REGD.NO: MNG/958/2016-18 RNI N0. KAR KAN/2003/11378 ● ಸಂಪುಟ 14 ● ಸಂಚಿಕೆ 236 ● ಮಂಗಳೂರು ● ಪುಟ 12 ● ಬೆಲೆ ರೂ. 4.00




## 2015-16ನೆ ಸಾಲಿನ ಬಾಳೇಕುಂದ್ರಿ ಪ್ರಶಸ್ತಿ ಪ್ರಕಟ

ಬೆಂಗಳೂರು, ಎ.25: ರಾಜ್ಯ ಸರಕಾರವು ಜಲಸಂಪನ್ಮೂಲ ಇಲಾಖೆಯಲ್ಲಿ ಅತ್ಯುತ್ತಮ ಸೇವೆ ಸಲ್ಲಿಸುತ್ತಿರುವ ಇಂಜಿನಿಯರ್‌ಗಳಿಗೆ 2015-2016ನೆ ಸಾಲಿನ ಎಸ್.ಜಿ. ಬಾಳೇಕುಂದ್ರಿ ಪ್ರಶಸ್ತಿಯನ್ನು ಪ್ರಕಟಿಸಿದೆ.

2015: ಕಲಬುರಗಿ ಐಪಿಸಿ ವೃತ್ತದ ಅಧೀಕ್ಷಕ ಅಭಿಯಂತರ ಜಗನ್ನಾಥ್ ಹಲಿಂಗೆಯನ್ನು 2015ನೆ ಸಾಲಿನ ಎಸ್.ಜಿ.ಬಾಳೇಕುಂದ್ರಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

2016: ಬೆಂಗಳೂರಿನ ಜಲ ಸಂವರ್ಧನ ಸಂಸ್ಥೆಯ ಜಲ ವಿಜ್ಞಾನ ಘಟಕದ ಅಧೀಕ್ಷಕ ಅಭಿಯಂತರ ಮಾಧವ, ಹೊಸದುರ್ಗ ಜಿಲ್ಲೆಯ ಭದ್ರಾ ಮೇಲ್ದಂಡೆ ಯೋಜನೆಯ ವಿಶ್ವೇಶ್ವರಯ್ಯ ಜಲ ನಿಗಮದ ಸಹಾಯಕ ಕಾರ್ಯಪಾಲಕ ಅಭಿಯಂತರ ಸಿ.ಎಲ್. ಪುಟ್ಟಸ್ವಾಮಿ, ಹಲಗಣೆಯ ಎಂಎಲ್‌ಐ ಉಪ ವಿಭಾಗದ ಕೃಷ್ಣಾ ಜಲ ಭಾಗ್ಯ ನಿಗಮದ ಸಹಾಯಕ ಕಾರ್ಯಪಾಲಕ ಅಭಿಯಂತರ ಪಿ.ಕೆ.ಶಂಕರ್. ಬೆಂಗಳೂರಿನ ಜಲ ಸಂವರ್ಧನ ಸಂಸ್ಥೆಯ ಕಾವೇರಿ ಘಟಕದ ಸಹಾಯಕ ಇಂಜಿನಿಯರ್ ಪ್ರೇಮಲತಾ ಆರ್., ನಾರಾಯಣಪುರ ಕೃಷ್ಣ ಜಲ ಭಾಗ್ಯ ನಿಗಮದ ಅಣೆಕಟ್ಟು ಉಪ ವಿಭಾಗದ ಸಹಾಯಕ ಇಂಜಿನಿಯರ್ ಹಳ್ಳೂರು ಅವರನ್ನು 2016ನೆ ಸಾಲಿನ ಎಸ್.ಜಿ.ಬಾಳೇಕುಂದ್ರಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಪ್ರಕಟನೆ ತಿಳಿಸಿದೆ.

## ಆ.15 ರಿಂದ ಇಂದಿರಾ ಕ್ಯಾಂಟೀನ್ ಆರಂಭ: ಸಿಎಂ

▶ ವರದಿ: ಪುಟ 8

## ಸ್ಟೆಂಟ್ ಕಂಪೆನಿಗಳ ಸ್ಟಂಟ್‌ಗೆ ಸರಕಾರ ಬ್ರೇಕ್

▶ ವರದಿ: ಪುಟ 9

### ಹುತಾತ್ಮ ಯೋಧರಿಗೆ ಅಂತಿಮ ನಮನ...



ಛತ್ತೀಸ್‌ಗಡದ ಸುಕ್ಮಾ ಜಿಲ್ಲೆಯಲ್ಲಿ ನಕ್ಸಲರ ದಾಳಿಯಲ್ಲಿ ಹುತಾತ್ಮರಾದ ಸಿಆರ್‌ಪಿಎಫ್ ಯೋಧರಿಗೆ ಕೇಂದ್ರ ಗೃಹಸಚಿವ ರಾಜನಾಥ ಸಿಂಗ್ ಅವರು ಮಂಗಳವಾರ ರಾಯ್‌ಪುರದಲ್ಲಿ ಶ್ರದ್ಧಾಂಜಲಿಗಳನ್ನು ಸಲ್ಲಿಸಿದರು. ಛತ್ತೀಸ್‌ಗಡ ಮುಖ್ಯಮಂತ್ರಿ ರಮಣಸಿಂಗ್ ಮತ್ತು ಸಹಾಯಕ ಗೃಹಸಚಿವ ಹಂಸರಾಜ್ ಆಹಿರ್ ಅವರು ಉಪಸ್ಥಿತರಿದ್ದರು.

## 2017ನೆ ಸಾಲಿನ ಸಿಇಟಿ ವೇಳಾಪಟ್ಟಿ ಪ್ರಕಟ

# ಮೇ 2, 3ರಂದು ಪರೀಕ್ಷೆ

**ಬೆಂಗಳೂರು, ಎ.25: ಪ್ರಸಕ್ತ ಸಾಲಿನ ಸಾಮಾನ್ಯ ಪ್ರವೇಶ ಪರೀಕ್ಷೆ(ಸಿಇಟಿ)ಯು ಮೇ 2 ಮತ್ತು 3ರಂದು ನಡೆಯಲಿದ್ದು, ಹೊರನಾಡು ಮತ್ತು ಗಡಿನಾಡು ಕನ್ನಡಿಗ ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಪರೀಕ್ಷೆಯು ಮೇ 4ರಂದು ನಡೆಯಲಿದೆ ಎಂದು ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ ತಿಳಿಸಿದ್ದಾರೆ.**



- ಅಭ್ಯರ್ಥಿಗಳು ಮಾನ್ಯತೆ ಇರುವ ಗುರುತಿನ ಚೀಟಿ ಹೊಂದಿರಬೇಕು.
- ಒಎಂಆರ್ ಉತ್ತರ ಪತ್ರಿಕೆಯಲ್ಲಿ ಶೇಡ್ ಮಾಡುವುದರ ಮೂಲಕ ಉತ್ತರಿಸಬೇಕು.
- ಗಡಿಯಾರ, ಟ್ಯಾಬ್ಲೆಟ್, ಮೊಬೈಲ್, ಕ್ಯಾಲ್ಕುಲೇಟರ್ ತರುವಂತಿಲ್ಲ.
- ನೀಲಿ ಅಥವಾ ಕಪ್ಪು ಶಾಯಿಯ ಬಾಲ್‌ಪಾಯಿಂಟ್ ಪೆನ್ ಬಳಸಬೇಕು.

### ಮೇ 4ರಂದು ಕನ್ನಡ ಭಾಷಾ ಪರೀಕ್ಷೆ

ಮೇ 2ರಂದು ಬೆಳಗ್ಗೆ 10:30ರಿಂದ 11:50ರವರೆಗೆ ಜೀವಶಾಸ್ತ್ರ, ಮಧ್ಯಾಹ್ನ 2:30ರಿಂದ 3:50ರವರೆಗೆ ಗಣಿತಶಾಸ್ತ್ರ, ಮೇ 3ರಂದು ಬೆಳಗ್ಗೆ 10:30 ರಿಂದ 11:50ರವರೆಗೆ ಭೌತಶಾಸ್ತ್ರ, ಮಧ್ಯಾಹ್ನ 2:30ರಿಂದ 3:50ರವರೆಗೆ ರಸಾಯನಶಾಸ್ತ್ರ, ಮೇ 4ರಂದು ಹೊರನಾಡು ಹಾಗೂ ಗಡಿನಾಡು ಕನ್ನಡಿಗ ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಪರೀಕ್ಷೆ(ಬೆಂಗಳೂರು ಕೇಂದ್ರದಲ್ಲಿ ಮಾತ್ರ)ನಡೆಯಲಿದೆ. ರಾಜ್ಯಾದ್ಯಂತ ಒಟ್ಟು 404 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದ್ದು, ಈ ಪೈಕಿ 82 ಪರೀಕ್ಷಾ ಕೇಂದ್ರಗಳು ಬೆಂಗಳೂರಿನಲ್ಲಿವೆ. ಒಟ್ಟು 1,85,411 ಅಭ್ಯರ್ಥಿಗಳು ಪರೀಕ್ಷೆಗೆ ನೋಂದಣಿ ಮಾಡಿಸಿದ್ದಾರೆ. 9ನೆ ಪುಟಕ್ಕೆ

### ■ ಎಸ್ಸಿ-ಎಸ್ಟಿಗಳ ವಿರುದ್ಧ ದೌರ್ಜನ್ಯ

# ತ್ವರಿತ ವಿಚಾರಣೆಗೆ ವಿಶೇಷ ನ್ಯಾಯಾಲಯಗಳು: ಸಿಎಂ

ಬೆಂಗಳೂರು, ಎ. 25: ಪರಿಶಿಷ್ಟ ಜಾತಿ ಮತ್ತು ಪಂಗಡಗಳ ವಿರುದ್ಧ ದೌರ್ಜನ್ಯ ಪ್ರಕರಣಗಳ ತ್ವರಿತ ವಿಚಾರಣೆಗೆ ವಿಶೇಷ ನ್ಯಾಯಾಲಯಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಸ್ಥಾಪಿಸಲು ಕ್ರಮ ಕೈಗೊಳ್ಳಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಮಂಗಳವಾರ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಮೇಲಿನ ದೌರ್ಜನ್ಯ ನಿಯಂತ್ರಣ ಸಂಬಂಧ ರಾಜ್ಯ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ನ್ಯಾಯಾಲಯಗಳ ಸ್ಥಾಪನೆ ಸಂಬಂಧ ಹೈಕೋರ್ಟಿನ ಮುಖ್ಯ ನ್ಯಾಯಮೂರ್ತಿಗಳನ್ನು ಭೇಟಿಯಾಗಿ ಸಮಾಲೋಚನೆ ನಡೆಸುವಂತೆ ಸಮಾಜ ಕಲ್ಯಾಣ ಮತ್ತು ಕಾನೂನು ಸಚಿವರಿಗೆ ನಿರ್ದೇಶನ ನೀಡಿದರು.

ದೌರ್ಜನ್ಯ ಪ್ರಕರಣಗಳಲ್ಲಿ ತಪ್ಪಿತಸ್ಥರಿಗೆ ಶಿಕ್ಷೆ ಪ್ರಮಾಣ ಹೆಚ್ಚಾಗಬೇಕು. ಇದಕ್ಕೆ ಪೂರಕವಾದ ಕ್ರಮಗಳನ್ನು ಪ್ರಾಸಿಕ್ಯೂಷನ್, ಪೊಲೀಸರು ಮತ್ತು ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳು ಕೈಗೊಳ್ಳಬೇಕು. ಎಲ್ಲ ದೌರ್ಜನ್ಯ ಪ್ರಕರಣಗಳನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಬೇಕೆಂದು ಅವರು ಕಟ್ಟಪ್ಪಣೆ ಮಾಡಿದರು.

ಸಾಕ್ಷ್ಯಾಧಾರಗಳ ಕೊರತೆಯಿಂದಾಗಿ ದೌರ್ಜನ್ಯ ಪ್ರಕರಣಗಳಲ್ಲಿ ಹಿನ್ನಡೆಯಾಗುತ್ತಿದ್ದು, ತಪ್ಪಿತಸ್ಥರು ಶಿಕ್ಷೆಯಿಂದ ಬಚಾವಾಗುತ್ತಿದ್ದಾರೆ. ಯಾವುದೇ ಕಾರಣಕ್ಕೂ ಇದಕ್ಕೆ ಅವಕಾಶ ಕೊಡದೆ ಸಾಕ್ಷ್ಯಾಧಾರ ಮತ್ತು ಸಾಕ್ಷಿಗಳನ್ನು ಒದಗಿಸುವ ಕೆಲಸ ಆಗಬೇಕು ಎಂದು ಸಿಎಂ ಹೇಳಿದರು.

ವಜಾಗೊಂಡ ಪ್ರಕರಣಗಳಿಗೆ ಸಂಬಂಧಿಸಿದಂತೆ ಮೇಲ್ಮನವಿ ಸಲ್ಲಿಸುವ ಪ್ರಕ್ರಿಯೆ ಚುರುಕಾಗಬೇಕು. ಮೇಲ್ಮನವಿ ಸಲ್ಲಿಕೆಗೆ ಅರ್ಹ ವಾದ ಪ್ರಕರಣಗಳ ಕುರಿತು ಅಧಿಕಾರಿಗಳು ಆಗಿಂದಾಗ್ಗೆ ಪರಿಶೀಲನೆ ನಡೆಸಬೇಕು. ಅಪೀಲು ಸಲ್ಲಿಸಲು ಅವಕಾಶವಿದ್ದರೂ ಆ ರೀತಿ ಮಾಡದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.



ಸಭೆಯಲ್ಲಿ ಮಾತನಾಡುತ್ತಿರುವ ಸಿಎಂ ಸಿದ್ದರಾಮಯ್ಯ. ಸಚಿವರಾದ ಡಾ.ಜಿ.ಪರಮೇಶ್ವರ್, ಟಿ.ಬಿ. ಜಯಚಂದ್ರ, ಆಂಜನೇಯ ಮತ್ತಿತರರು ಉಪಸ್ಥಿತರಿದ್ದಾರೆ.

### ಶಿಕ್ಷೆಗೊಳಪಡಿಸಿ

> ಸುಳ್ಳು ಜಾತಿ ಪ್ರಮಾಣ ಪತ್ರ ಪಡೆದವರ ವಿರುದ್ಧ ಕೈಗೊಂಡಿರುವ ಕ್ರಮ ಕುರಿತು ಪರಿಶೀಲನೆ ನಡೆಸಿದ ಸಿದ್ದರಾಮಯ್ಯ, ಸುಳ್ಳು ಮಾಹಿತಿ ನೀಡಿ ಜಾತಿ ಪ್ರಮಾಣ ಪತ್ರ ಪಡೆದವರು ಮತ್ತು ಅವರಿಗೆ ಸಹಕರಿಸುವ ಅಧಿಕಾರಿಗಳನ್ನೂ ಶಿಕ್ಷೆಗೆ ಗುರಿಪಡಿಸಬೇಕು.
>
> । ಸಿದ್ದರಾಮಯ್ಯ ಮುಖ್ಯಮಂತ್ರಿ

**ಶಿಕ್ಷೆಗೆ ಒಳಪಡಿಸಿ:** ಸುಳ್ಳು ಜಾತಿ ಪ್ರಮಾಣ ಪತ್ರ ಪಡೆದವರ ವಿರುದ್ಧ ಕೈಗೊಂಡಿರುವ ಕ್ರಮ ಕುರಿತು ಪರಿಶೀಲನೆ ನಡೆಸಿದ ಸಿದ್ದರಾಮಯ್ಯ, ಸುಳ್ಳು ಮಾಹಿತಿ ನೀಡಿ ಜಾತಿ ಪ್ರಮಾಣ ಪತ್ರ ಪಡೆದವರು ಮತ್ತು ಅವರಿಗೆ ಸಹಕರಿಸುವ ಅಧಿಕಾರಿಗಳನ್ನೂ ಶಿಕ್ಷೆಗೆ ಗುರಿಪಡಿಸಬೇಕು ಎಂದು ಸೂಚಿಸಿದರು.

ಸುಳ್ಳು ಜಾತಿ ಪ್ರಮಾಣ ಪತ್ರ ಪಡೆಯುವವರು, ಅರ್ಜಿ ಸಲ್ಲಿಸುವವರ ಮೇಲೆ ಪೊಲೀಸ್ ಇಲಾಖೆ ಅಧಿಕಾರಿಗಳು ನಿಗಾ ಇರಿಸಬೇಕು. ಸುಳ್ಳು ಮಾಹಿತಿ ನೀಡಿ ಜಾತಿ ಪ್ರಮಾಣ ಪತ್ರ ಪಡೆದಿರುವುದು ಸಾಬೀತಾದ ಕೂಡಲೇ ಕಾನೂನು ಕ್ರಮ ಜರುಗಿಸಬೇಕೆಂದು ಅವರು ತಿಳಿಸಿದರು.

ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಗಳನ್ನು ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳು ಪ್ರತೀ ಮೂರು ತಿಂಗಳಿಗೊಮ್ಮೆ ಕಡ್ಡಾಯವಾಗಿ ನಡೆಸಬೇಕು. ಈ ಸಂಬಂಧ ಜಿಲ್ಲಾ ಉಸ್ತುವಾರಿ ಸಚಿವರಿಗೂ ಸೂಚನೆ ನೀಡಲಾಗುವುದು ಎಂದು ಸಿದ್ದರಾಮಯ್ಯ ಹೇಳಿದರು.

ಸಚಿವರಾದ ಡಾ.ಜಿ.ಪರಮೇಶ್ವರ್, ಟಿ.ಬಿ.ಜಯಚಂದ್ರ, ಆಂಜನೇಯ, ರಮೇಶ್ ಜಾರಕಿಹೊಳಿ, ಪ್ರಿಯಾಂಕ್ ಖರ್ಗೆ, ಶಾಸಕರಾದ ಶಿವಮೂರ್ತಿ, ತುಕಾರಾಂ, ಗೋವಿಂದ ಕಾರಜೋಳ, ಚಿಕ್ಕಮಾದು, ಸರಕಾರದ ಮುಖ್ಯ ಕಾರ್ಯದರ್ಶಿ ಸುಭಾಷ್ಚಂದ್ರ ಕುಂಟಿಯಾ, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

> ಪರಿಶಿಷ್ಟ ಜಾತಿ ಮತ್ತು ಪಂಗಡಗಳವರಿಗೆ ಕ್ಷೌರ ಮಾಡಲು ಮತ್ತು ದೇವಾಲಯ ಪ್ರವೇಶ ನಿರಾಕರಿಸುವ ಪ್ರಕರಣಗಳ ಸಂಖ್ಯೆ ಕಡಿಮೆಯಾಗಿದೆ. ಆದರೂ, ಈ ಬಗ್ಗೆ ಅಲ್ಲಲ್ಲಿ ಮಾಧ್ಯಮಗಳಲ್ಲಿ ವರದಿಯಾಗುತ್ತಿದ್ದು, ಈ ಕುರಿತು ಜಿಲ್ಲಾಧಿಕಾರಿಗಳು ಸಭೆ ನಡೆಸಿ ಸೂಕ್ತ ಗಮನಹರಿಸಬೇಕು.
>
> । ಸಿದ್ದರಾಮಯ್ಯ, ಮುಖ್ಯಮಂತ್ರಿ

## ಹೊಟೇಲ್‌ಗಳಲ್ಲಿ ಗ್ರಾಹಕರಿಗೆ ಸೇವಾ ಶುಲ್ಕ ರದ್ದಿಗೆ ಕ್ರಮ

### ಯು.ಟಿ.ಖಾದರ್



ಸಾಂದರ್ಭಿಕ ಚಿತ್ರ

> ಆಹಾರವನ್ನು ಸಾರ್ವಜನಿಕರು ವ್ಯರ್ಥ ಮಾಡದಂತೆ ಕ್ರಮ ವಹಿಸಬೇಕು. ಮಿಕ್ಕ ಆಹಾರವನ್ನು ಸ್ವಯಂ ಸೇವಾ ಸಂಸ್ಥೆಗಳಿಗೆ ನೀಡಬೇಕು. ಈ ಹಿಂದೆ ಹೊಟೇಲ್‌ಗಳಲ್ಲಿ ಶೇ.6ರಿಂದ 8 ರಷ್ಟು ಸೇವಾ ಶುಲ್ಕವನ್ನು ವಿಧಿಸುತ್ತಿದ್ದರು. ಹೊಟೇಲ್‌ಗಳಲ್ಲಿ ಸೇವಾ ಶುಲ್ಕ ಹೇರುವುದರ ವಿರುದ್ಧ ಗ್ರಾಹಕರು ನ್ಯಾಯಾಲಯದ ಮೊರೆ ಹೋಗಬಹುದು.
>
> । ಯು.ಟಿ.ಖಾದರ್, ಆಹಾರ ಮತ್ತು ನಾಗರಿಕ ಪೂರೈಕೆ ಖಾತೆ ಸಚಿವ

ಬೆಂಗಳೂರು, ಎ.25: ಹೊಟೇಲ್‌ಗಳಲ್ಲಿ ಗ್ರಾಹಕರಿಗೆ ಸೇವಾ ಶುಲ್ಕವನ್ನು ವಿಧಿಸದಂತೆ ಹೊಟೇಲ್ ಮಾಲಕರೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಆಹಾರ ಮತ್ತು ನಾಗರಿಕ ಪೂರೈಕೆ ಖಾತೆ ಸಚಿವ ಯು.ಟಿ.ಖಾದರ್ ಇಂದಿಲ್ಲಿ ತಿಳಿಸಿದ್ದಾರೆ.

ಮಂಗಳವಾರ ವಿಕಾಸ ಸೌಧದಲ್ಲಿನ ತನ್ನ ಕೊಠಡಿಯಲ್ಲಿ ಏರ್ಪಡಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಮಂತ್ರಾಲಯವು ಕಳುಹಿಸಿರುವ ಆದೇಶದನ್ವಯ ಈ ಕ್ರಮ ಕೈಗೊಳ್ಳಲಾಗುವುದು ಎಂದರು.

**ಪುನರ್ ಬೆಳಕು:** ಅನಿಲ ರಹಿತ ಪಡಿತರ ಚೀಟಿದಾರರಿಗೆ ಉಚಿತ ಅನಿಲ ಸಂಪರ್ಕ ಒದಗಿಸಲು 'ಅನಿಲ ಭಾಗ್ಯ' ಯೋಜನೆ ಹಾಗೂ ಗ್ರಾಮೀಣ ಪ್ರದೇಶದ ಅನಿಲ ಪಡಿತರ ಚೀಟಿದಾರರಿಗೆ ಆಯ್ಕೆ ಮೇರೆಗೆ ಸೀಮೆಎಣ್ಣೆ ಬದಲಿಗೆ ಎಲ್‌ಇಡಿ ಬಲ್ಬ್‌ಸೆಟ್ (ರೀಚಾರ್ಜೆಬಲ್) ಅನ್ನು 'ಪುನರ್ ಬೆಳಕು ಯೋಜನೆ'ಯಡಿ ಅನುಷ್ಠಾನಗೊಳಿಸಲಾಗುವುದು ಎಂದು ಅವರು ಹೇಳಿದರು.

ಉಜ್ವಲ ಯೋಜನೆಯಡಿ ಕೇಂದ್ರ ಸರಕಾರ ಆಯ್ಕೆಯಾದ ಫಲಾನುಭವಿಗಳಿಗೆ ಉಚಿತ ಅನಿಲ ಸಂಪರ್ಕ ನೀಡುತ್ತದೆ. ಇದಕ್ಕೆ ಪೂರಕವಾಗಿ ರಾಜ್ಯ ಸರಕಾರವು 1 ಸಾವಿರ ರೂ.ಬೆಲೆಯುಳ್ಳ ಎರಡು ಬರ್ನರ್‌ಗಳ ಗ್ಯಾಸ್ ಸ್ಟವ್ ನೀಡುತ್ತದೆ ಎಂದು ಹೇಳಿದರು.

ಶೇ.100ರಷ್ಟು ಎಲ್‌ಪಿಜಿಯುಕ್ತ ರಾಜ್ಯವನ್ನಾಗಿಸಲು ಕೇಂದ್ರದ ಉಜ್ವಲ ಯೋಜನೆಯ ವ್ಯಾಪ್ತಿಗೆ ಒಳಪಡದಿರುವ ಕುಟುಂಬಗಳಿಗೂ ರಾಜ್ಯ ಸರಕಾರದಿಂದ 'ಅನಿಲಭಾಗ್ಯ' ಯೋಜನೆಯಡಿ ಉಚಿತ ಅನಿಲ ಸಂಪರ್ಕ ಕಲ್ಪಿಸಲಾಗುವುದು. ಗ್ರಾಮೀಣ ಭಾಗದ ಗ್ಯಾಸ್ ಸಂಪರ್ಕವಿರುವ ಗ್ರಾಹಕರಿಗೆ ಕಾರ್ಡ್‌ಗೆ 1ಲೀಟರ್ ಸೀಮೆಎಣ್ಣೆಯನ್ನು ನೀಡಲಾಗುವುದು ಎಂದರು. 9ನೆ ಪುಟಕ್ಕೆ

# ಪ್ರಜ್ಞಾಸಿಂಗ್‌ಗೆ ಜಾಮೀನು ಪುರೋಹಿತ್‌ಗೆ ನಿರಾಕರಣೆ

### ಮಾಲೆಗಾಂವ್ ಸ್ಫೋಟ ಪ್ರಕರಣ



ಸಾಧ್ವಿ ಪ್ರಜ್ಞಾಸಿಂಗ್



ಲೆ.ಕ.ಶ್ರೀಕಾಂತ್ ಪುರೋಹಿತ್

ಮುಂಬೈ,ಎ.25: 2008ರ ಮಾಲೆಗಾಂವ್ ಸ್ಫೋಟ ಸಂಚಿನ ಪ್ರಮುಖ ಆರೋಪಿ ಸಾಧ್ವಿ ಪ್ರಜ್ಞಾಸಿಂಗ್ ಠಾಕೂರ್‌ಗೆ ಬಾಂಬೆ ಹೈಕೋರ್ಟ್ ಮಂಗಳವಾರ ಜಾಮೀನು ನೀಡಿದೆ. ಆದರೆ ಪ್ರಕರಣದ ಸಹಆರೋಪಿ ಲೆ.ಕ.ಪ್ರಸಾದ್ ಶ್ರೀಕಾಂತ್ ಪುರೋಹಿತ್‌ಗೆ ಜಾಮೀನು ನೀಡಲು ನಿರಾಕರಿಸಿದೆ.

5 ಲಕ್ಷ ರೂ.ಗಳ ಬಾಂಡ್‌ನೊಂದಿಗೆ ಸಾಧ್ವಿಗೆ ಜಾಮೀನು ನೀಡಿರುವ ನ್ಯಾಯಾಲಯ, ಬಿಡುಗಡೆಯ ಬಳಿಕ ಯಾವುದೇ ಸಾಕ್ಷ್ಯಾಧಾರಗಳನ್ನು ತಿರುಚದಂತೆ ಹಾಗೂ ಪಾಸ್‌ಪೋರ್ಟ್‌ನ್ನು ರಾಷ್ಟ್ರೀಯ ತನಿಖಾ ಸಂಸ್ಥೆ (ಎನ್‌ಐಎ)ಗೆ ಒಪ್ಪಿಸುವಂತೆಯೂ ಆಕೆಗೆ ಆದೇಶಿಸಿದೆ. ಅಗತ್ಯವಿದ್ದಾಗ ಎನ್‌ಐಎ ನ್ಯಾಯಾಲಯದ ಮುಂದೆ ಹಾಜರಾಗಬೇಕೆಂದು ಅದು ಸೂಚಿಸಿದೆ.

ಪ್ರಜ್ಞಾಸಿಂಗ್ ವಿರುದ್ಧ ಮೇಲ್ನೋಟಕ್ಕೆ ಯಾವುದೇ ಬಲವಾದ ಸಾಕ್ಷ್ಯಗಳು ಲಭ್ಯವಿಲ್ಲದ ಕಾರಣ ಆಕೆಗೆ ಜಾಮೀನು ನೀಡಿರುವುದಾಗಿ ನ್ಯಾಯಮೂರ್ತಿಗಳಾದ ರಂಜಿತ್ ಮೋರೆ ಹಾಗೂ ಶಾಲಿ ಫನ್ಸಾಲ್ಕರ್ ಜೋಶಿ ಅವರನ್ನೊಳಗೊಂಡ ವಿಭಾಗೀಯ ಪೀಠ ತಿಳಿಸಿದೆ.

ಮಹಾರಾಷ್ಟ್ರದ ಮಾಲೆಗಾಂವ್ ಪಟ್ಟಣದಲ್ಲಿ 2008ರ ಸೆಪ್ಟಂಬರ್ 29ರಂದು ಮಸೀದಿಯೊಂದರ ಸಮೀಪ ಮೋಟಾರ್‌ಸೈಕಲ್‌ನಲ್ಲಿ ಇರಿಸಲಾಗಿದ್ದ ಬಾಂಬೊಂದು ಸ್ಫೋಟಿಸಿ ಎಂಟು ಮಂದಿ ಸಾವನ್ನಪ್ಪಿದ್ದರು ಹಾಗೂ 80ಕ್ಕೂ ಅಧಿಕ ಮಂದಿ ಗಾಯಗೊಂಡಿದ್ದರು. ಈ ಪ್ರಕರಣಕ್ಕೆ ಸಂಬಂಧಿಸಿ ಸಾಧ್ವಿ ಪ್ರಜ್ಞಾಸಿಂಗ್ ಹಾಗೂ ಶ್ರೀಕಾಂತ್ ಪುರೋಹಿತ್ ಅವರನ್ನು 2008ರಲ್ಲಿ ಬಂಧಿಸಲಾಗಿತ್ತು ಹಾಗೂ ಅವರು ಆಗಿನಿಂದ ಜೈಲಿನಲ್ಲಿಯೇ ಇದ್ದಾರೆ. ತಮ್ಮ ಜಾಮೀನು ಮನವಿಯನ್ನು ತಿರಸ್ಕರಿಸಿದ ವಿಶೇಷ ನ್ಯಾಯಾಲಯದ ಹಿಂದಿನ ಆದೇಶವನ್ನು ಪ್ರಶ್ನಿಸಿ ಸಾಧ್ವಿ ಪ್ರಜ್ಞಾಸಿಂಗ್ ಹಾಗೂ ಪುರೋಹಿತ್ ಸಲ್ಲಿಸಿದ್ದ ಮೇಲ್ಮನವಿಯ ವಿಚಾರಣೆಯನ್ನು ಇಂದು ನ್ಯಾಯಾಲಯ ನಡೆಸಿತ್ತು. 9ನೆ ಪುಟಕ್ಕೆ

### ಪುರೋಹಿತ್‌ಗೆ ಜಾಮೀನು ನೀಡಲು ಎನ್‌ಐಎ ವಿರೋಧ

ಲೆ.ಕ.ಪ್ರಸಾದ್ ಶ್ರೀಕಾಂತ್ ಪುರೋಹಿತ್ ಸಲ್ಲಿಸಿದ ಜಾಮೀನು ಬಿಡುಗಡೆಯ ಮನವಿಯನ್ನು ಎನ್‌ಐಎ ತೀವ್ರವಾಗಿ ವಿರೋಧಿಸಿದೆ. ತನಗೆ ಲಭ್ಯವಾಗಿರುವ ಹಲವಾರು ಆಡಿಯೋ ಹಾಗೂ ವೀಡಿಯೊ ದಾಖಲೆಗಳು, ದೂರವಾಣಿ ಕರೆ ವಿವರಗಳು ಹಾಗೂ ಸಾಕ್ಷಿಗಳ ಹೇಳಿಕೆಗಳು ಆತ ಈ ಪ್ರಕರಣದಲ್ಲಿ ಶಾಮೀಲಾಗಿರುವುದನ್ನು ಸಾಬೀತುಪಡಿಸಿರುವುದಾಗಿ ಅದು ಹೇಳಿದೆ.

ಮಾಲೆಗಾಂವ್ ಸ್ಫೋಟ ಸಂಚಿನ ಸಭೆಗಳಲ್ಲಿ ಪುರೋಹಿತ್ ಸಕ್ರಿಯವಾಗಿ ಪಾಲ್ಗೊಂಡಿದ್ದ ಹಾಗೂ ಸ್ಫೋಟಕ್ಕೆ ಬಳಸಲು ಬೇಕಾದ ಸ್ಫೋಟಕಗಳನ್ನು ಕೂಡಾ ಏರ್ಪಾಡು ಮಾಡಿದ್ದನೆಂದು ಎನ್‌ಐಎ ಚಾರ್ಜ್‌ಶೀಟ್‌ನಲ್ಲಿ ಆಪಾದಿಸಿದೆ.

ಮಾಲೆಗಾಂವ್ ಸ್ಫೋಟ ಪ್ರಕರಣದಲ್ಲಿ ಎನ್‌ಐಎ ಕೆಲವು ಆರೋಪಿಗಳನ್ನು ಮಾತ್ರವೇ ಆಯ್ದು ದೋಷಮುಕ್ತಗೊಳಿಸುತ್ತಿದೆ ಹಾಗೂ ಅದು ತನ್ನನ್ನು ಈ ಪ್ರಕರಣದಲ್ಲಿ ಬಲಿಪಶುವನ್ನಾಗಿ ಮಾಡಿದೆಯೆಂದು ಪುರೋಹಿತ್ ವಾದಿಸಿದ್ದಾನೆ.

### ಸುಪ್ರೀಂಗೆ ಮೇಲ್ಮನವಿ ಸಲ್ಲಿಸಲು ಸಂತ್ರಸ್ತ ಕುಟುಂಬಗಳ ನಿರ್ಧಾರ

ಪ್ರಜ್ಞಾಸಿಂಗ್ ಜಾಮೀನು ಮನವಿಗೆ ಆಕ್ಷೇಪ ವ್ಯಕ್ತಪಡಿಸಿ ಅರ್ಜಿ ಸಲ್ಲಿಸಿದ್ದ ಮಾಲೆಗಾಂವ್ ಸ್ಫೋಟ ಪ್ರಕರಣದ ಸಂತ್ರಸ್ತ ಕುಟುಂಬಗಳು, ಇಂದು ನ್ಯಾಯಾಲಯ ನೀಡಿದ ಆದೇಶಕ್ಕೆ ತಡೆಯಾಜ್ಞೆ ಕೋರಿದ್ದು, ತಾವು ಸುಪ್ರೀಂಕೋರ್ಟ್‌ಗೆ ಮೇಲ್ಮನವಿ ಸಲ್ಲಿಸುವುದಾಗಿ ತಿಳಿಸಿವೆ. ಪ್ರಜ್ಞಾಸಿಂಗ್ ಮಾಲೆಗಾಂವ್ ಸ್ಫೋಟ ಪ್ರಕರಣದ ಪ್ರಮುಖ ರೂವಾರಿಗಳಲೊಬ್ಬಳೆಂಬುದನ್ನು ದೃಢಪಡಿಸುವ ಸಾಕಷ್ಟು ಪುರಾವೆಗಳು ಎನ್‌ಐಎ ಸಲ್ಲಿಸಿರುವ ದೋಷಾರೋಪಪಟ್ಟಿಯಲ್ಲಿ ಲಭ್ಯವಿರುವುದಾಗಿ ಅವರು ಹೇಳಿದ್ದಾರೆ.




## ನಕ್ಸಲ್ ವಿರೋಧಿ ಸಮರದ ಕಾರ್ಯತಂತ್ರ ಪುನಾರಚನೆ



> ನಮ್ಮ ಯೋಧರ ಬಲಿದಾನ ವ್ಯರ್ಥವಾಗದು. ಬಸ್ತಾರ್ ಪ್ರಾಂತದಲ್ಲಿ ನಡೆಯುತ್ತಿರುವ ರಸ್ತೆಗಳ ಅಭಿವೃದ್ಧಿಯಿಂದ ನಕ್ಸಲರು ಹತಾಶರಾಗಿದ್ದಾರೆ. ಆದರೆ ಅವರು ತಮ್ಮ ದುಷ್ಟ ಉದ್ದೇಶಗಳನ್ನು ಸಾಧಿಸುವಲ್ಲಿ ಯಶಸ್ವಿಯಾಗಲಾರರು. ನಕ್ಸಲ್ ಹಾವಳಿಯನ್ನು ನಿಗ್ರಹಿಸಲು ಕೇಂದ್ರ ಹಾಗೂ ರಾಜ್ಯಗಳು ಒಗ್ಗೂಡಿ ಶ್ರಮಿಸಲಿವೆ.
>
> । ರಾಜನಾಥ್ ಸಿಂಗ್, ಗೃಹ ಸಚಿವ

ರಾಯ್‌ಪುರ,ಎ.25: ನಕ್ಸಲರ ವಿರೋಧಿ ಸಮರದ ಕಾರ್ಯತಂತ್ರವನ್ನು ಕೇಂದ್ರ ಸರಕಾರವು ಪುನರ್‌ರೂಪಿಸಲಿದೆಯೆಂದು ಕೇಂದ್ರ ಗೃಹ ಸಚಿವ ರಾಜನಾಥ್ ಸಿಂಗ್ ಮಂಗಳವಾರ ತಿಳಿಸಿದ್ದಾರೆ. ಛತ್ತೀಸ್‌ಗಡದ ಸುಕ್ಮಾ ಜಿಲ್ಲೆಯಲ್ಲಿ ನಕ್ಸಲ್ ದಾಳಿಗೆ ಬಲಿಯಾದ 26 ಸಿಆರ್‌ಪಿಎಫ್ ಯೋಧರಿಗೆ ರಾಯ್‌ಪುರದಲ್ಲಿ ಶ್ರದ್ಧಾಂಜಲಿ ಸಲ್ಲಿಸಿದ ಬಳಿಕ ಅವರು ಸುದ್ದಿಗಾರರೊಂದಿಗೆ ಮಾತನಾಡುತ್ತಿದ್ದರು.

ಎಡಪಂಥೀಯ ತೀವ್ರವಾದದ ಮೂಲೋತ್ಪಾಟನೆಗಾಗಿ ವಿವಿಧ ಮಾರ್ಗೋಪಾಯಗಳನ್ನು ಹುಡುಕಲು ಕೇಂದ್ರ ಸರಕಾರವು ಮೇ 8ರಂದು ಎಲ್ಲಾ ನಕ್ಸಲ್ ಪೀಡಿತ ರಾಜ್ಯಗಳ ಸಭೆ ಕರೆದಿರುವುದಾಗಿ ಅವರು ತಿಳಿಸಿದರು.

ನಕ್ಸಲ್ ವಿರೋಧಿ ಹೋರಾಟದ ಕಾರ್ಯತಂತ್ರದ ಪುನರಾವಲೋಕನ ನಡೆಸಲಿದ್ದೇವೆ. ಅಗತ್ಯಬಿದ್ದಲ್ಲಿ ಅದನ್ನು ಪುನರ್‌ರೂಪಿಸಲಾಗುವುದು ಎಂದವರು ಹೇಳಿದರು. ಎಡಪಂಥೀಯ ಉಗ್ರವಾದದ ಪಿಡುಗನ್ನು ಬೇರುಸಮೇತ ಕಿತ್ತೊಗೆಯಲು ಕಾರ್ಯತಂತ್ರವೊಂದನ್ನು ರೂಪಿಸಲಾಗುತ್ತಿದೆಯೆಂದು ಸಿಂಗ್ ತಿಳಿಸಿದರು.

ಎಡಪಂಥೀಯ ಉಗ್ರಗಾಮಿ ಗುಂಪುಗಳು ಅಭಿವೃದ್ಧಿಗೆ ವಿರೋಧಿಯಾಗಿದ್ದು, ರಾಜ್ಯದ ಪ್ರಗತಿಯನ್ನು ಅಸ್ಥಿರಗೊಳಿಸಲು ಪ್ರಯತ್ನಿಸುತ್ತಿವೆ ಎಂದರು. ಮಾವೋವಾದಿಗಳು ಅಮಾಯಕ ಬುಡಕಟ್ಟು ಜನರನ್ನು ಮಾನವ ಗುರಾಣಿಗಳಂತೆ ಬಳಸಿಕೊಳ್ಳುತ್ತಿದ್ದಾರೆಂದು ಗೃಹ ಸಚಿವರು ಆರೋಪಿಸಿದರು.

"ನಮ್ಮ ಯೋಧರ ಬಲಿದಾನ ವ್ಯರ್ಥವಾಗದು. ಬಸ್ತಾರ್ ಪ್ರಾಂತದಲ್ಲಿ ನಡೆಯುತ್ತಿರುವ ರಸ್ತೆಗಳ ಅಭಿವೃದ್ಧಿಯಿಂದ ನಕ್ಸಲರು ಹತಾಶರಾಗಿದ್ದಾರೆ. ನಕ್ಸಲ್ ಹಾವಳಿಯನ್ನು ನಿಗ್ರಹಿಸಲು ಕೇಂದ್ರ ಹಾಗೂ ರಾಜ್ಯಗಳು ಒಗ್ಗೂಡಿ ಶ್ರಮಿಸಲಿವೆಯೆಂದು ರಾಜನಾಥ್ ತಿಳಿಸಿದರು.

ಹುತಾತ್ಮ ಯೋಧರ ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ಛತ್ತೀಸ್‌ಗಡದ ರಾಜ್ಯಪಾಲ ಬಲರಾಮ್‌ಜಿ ದಾಸ್ ಟಂಡನ್, ಮುಖ್ಯಮಂತ್ರಿ ರಮಣ್‌ಸಿಂಗ್, ಕೇಂದ್ರ ಸಹಾಯಕ ಗೃಹ ಸಚಿವ ಹಂಸ್‌ರಾಜ್ ಆಹಿರ್ ಹಾಗೂ ರಾಜ್ಯ ಸರಕಾರ ಹಾಗೂ ಅರೆಸೈನಿಕ ಪಡೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಸೇನಾಪಡೆಗಳ ಕ್ಯಾಂಟೀನ್‌ಗಳಲ್ಲಿ ಪತಂಜಲಿ ಜ್ಯೂಸ್ ಮಾರಾಟ ಸ್ಥಗಿತ: ಕಳಪೆ ಗುಣಮಟ್ಟ ಕಾರಣ

ಹೊಸದಿಲ್ಲಿ, ಎ.25: ಸಶಸ್ತ್ರ ಪಡೆಗಳಿಗೆ ಗ್ರಾಹಕ ಸಾಮಗ್ರಿಗಳನ್ನು ಪೂರೈಕೆ ಮಾಡುವ ಕ್ಯಾಂಟೀನ್ ಸ್ಟೋರ್ಸ್ ಇಲಾಖೆ (ಸಿಎಸ್‌ಡಿ)ಯು ಪತಂಜಲಿ ಆಯುರ್ವೇದ ಸಂಸ್ಥೆಯ ಉತ್ಪನ್ನವಾದ ಆಮ್ಲಾ ಜ್ಯೂಸ್ (ನೆಲ್ಲಿಕಾಯಿ ರಸ)ನ ಮಾರಾಟವನ್ನು ಅಮಾನತಿನಲ್ಲಿರಿಸಿದೆ. ಈ ಉತ್ಪನ್ನವು ಪ್ರಯೋಗಾಲಯದ ಪರೀಕ್ಷೆಯಲ್ಲಿ ಉತ್ತೀರ್ಣಗೊಳ್ಳಲು ವಿಫಲವಾಗಿರುವ ಹಿನ್ನೆಲೆಯಲ್ಲಿ ಅದರ ಮಾರಾಟವನ್ನು ಸ್ಥಗಿತಗೊಳಿಸಲಾಗಿದೆಯೆಂದು ಸಿಎಸ್‌ಡಿ ಮೂಲಗಳು ತಿಳಿಸಿವೆ.




ಈ ಬಗ್ಗೆ ಪತಂಜಲಿ ಆಯುರ್ವೇದದ ಸಂಸ್ಥೆ ಹೇಳಿಕೆಯೊಂದನ್ನು ನೀಡಿ, 'ಆಮ್ಲಾ ಜ್ಯೂಸ್' ಆಯುರ್ವೇದ ಉತ್ಪನ್ನವಾಗಿದ್ದು ಅದು ಮಾರುಕಟ್ಟೆಯಲ್ಲಿ ಲಭ್ಯವಿರುವ ಇತರ ಸಾಧಾರಣ ಪೇಯಗಳಿಗಿಂತ ವಿಭಿನ್ನವಾಗಿದೆ ಹಾಗೂ ಮಾನವಬಳಕೆಗೆ ಸಂಪೂರ್ಣ ಸುರಕ್ಷಿತವಾಗಿದೆಯೆಂದು ಹೇಳಿದೆ.

ಪತಂಜಲಿ ಆಯುರ್ವೇದದ ಆಮ್ಲಾ ಜ್ಯೂಸ್ ಪ್ರಯೋಗಾಲಯದ ಪರೀಕ್ಷೆಯಲ್ಲಿ ವಿಫಲವಾಗಿರುವ ಹಿನ್ನೆಲೆಯಲ್ಲಿ ಕಂಪೆನಿಗೆ ನೋಟಿಸ್ ನೀಡಿರುವುದಾಗಿ ರಕ್ಷಣಾ ಇಲಾಖೆಯ ಮೂಲಗಳು ತಿಳಿಸಿವೆ. ಕೋಲ್ಕತಾದ ಪಶ್ಚಿಮಬಂಗಾಳದ ಸಾರ್ವಜನಿಕ ಆರೋಗ್ಯ ಪ್ರಯೋಗಾಲಯದಲ್ಲಿ ಪರೀಕ್ಷೆಯನ್ನು ನಡೆಸಲಾಗಿತ್ತು. ಸಂಸ್ಥೆಯಿಂದ ಉತ್ತರ ದೊರೆತ ಬಳಿಕ ಮುಂದಿನ ಕ್ರಮ ಕೈಗೊಳ್ಳುವುದಾಗಿ ಸಿಎಸ್‌ಡಿ ಹೇಳಿದೆ. 9ನೆ ಪುಟಕ್ಕೆ

## ಛೋಟಾ ರಾಜನ್‌ಗೆ ಏಳು ವರ್ಷ ಜೈಲು

### ನಕಲಿ ಪಾಸ್‌ಪೋರ್ಟ್ ಪ್ರಕರಣ

ಹೊಸದಿಲ್ಲಿ,ಎ.25: ಇಲ್ಲಿಯ ವಿಶೇಷ ನ್ಯಾಯಾಲಯವು ನಕಲಿ ಪಾಸ್‌ಪೋರ್ಟ್ ಪ್ರಕರಣದಲ್ಲಿ ಗ್ಯಾಂಗ್‌ಸ್ಟರ್ ಛೋಟಾ ರಾಜನ್ ಮತ್ತು ಬೆಂಗಳೂರು ಪಾಸ್‌ಪೋರ್ಟ್ ಕಚೇರಿಯ ಮೂವರು ನಿವೃತ್ತ ಅಧಿಕಾರಿಗಳಿಗೆ ತಲಾ ಏಳು ವರ್ಷಗಳ ಜೈಲು ಶಿಕ್ಷೆಯನ್ನು ವಿಧಿಸಿ ಮಂಗಳವಾರ ಆದೇಶಿಸಿದೆ.

ಮೌಲ್ಯಯುತವಾದ ಭದ್ರತೆ(ಪಾಸ್‌ಪೋರ್ಟ್)ಯ ನಕಲು ಸೇರಿದಂತೆ ವಿವಿಧ ಅಪರಾಧಗಳಿಗಾಗಿ ಗರಿಷ್ಠ ಜೀವಾವಧಿ ಶಿಕ್ಷೆಯನ್ನು ವಿಧಿಸಬಹುದಾಗಿದ್ದರೂ ವಿಶೇಷ ನ್ಯಾಯಾಧೀಶ ವೀರೇಂದ್ರ ಕುಮಾರ್ ಗೋಯಲ್ ಅವರು ಏಳು ವರ್ಷಗಳ ಶಿಕ್ಷೆಯನ್ನು ಪ್ರಕಟಿಸಿದರು. ಜಯಶ್ರೀ ದತ್ತಾತ್ರೆಯ ರಾಹತೆ, ದೀಪಕ್ ನಟವರ್ ಲಾಲ್ ಶಾ ಮತ್ತು ಲಲಿತಾ ಲಕ್ಷ್ಮಣನ್ ಅವರು ಶಿಕ್ಷೆಗೊಳಗಾದ ನಿವೃತ್ತ ಅಧಿಕಾರಿಗಳಾಗಿದ್ದಾರೆ.



ರಾಜನ್ ಈಗಾಗಲೇ ದಿಲ್ಲಿಯ ತಿಹಾರ ಜೈಲಿನಲ್ಲಿದ್ದು, ಜಾಮೀನಿನಲ್ಲಿ ಬಿಡುಗಡೆ ಗೊಂಡಿದ್ದ ಇತರ ಮೂವರನ್ನು ಸೋಮವಾರ ಪ್ರಕರಣದ ತೀರ್ಪು ಘೋಷಣೆಯಾದ ಬಳಿಕ ವಶಕ್ಕೆ ತೆಗೆದುಕೊಳ್ಳಲಾಗಿತ್ತು.

ಮಾ.28ರಂದು ನ್ಯಾಯಾಲಯವು, ರಾಜನ್ ಮೂವರು ಸರಕಾರಿ ಅಧಿಕಾರಿಗಳ ನೆರವಿನಿಂದ ಕರ್ನಾಟಕದ ಮಂಡ್ಯದ ವಿಳಾಸವನ್ನು ನೀಡಿ ಮೋಹನ ಕುಮಾರ ಎಂಬ ಹೆಸರಿನಲ್ಲಿ ನಕಲಿ ಪಾಸ್‌ಪೋರ್ಟ್ ಪಡೆದುಕೊಂಡಿದ್ದ ಪ್ರಕರಣದಲ್ಲಿ ತೀರ್ಪನ್ನು ಕಾಯ್ದಿರಿಸಿತ್ತು. ಪ್ರಕರಣದಲ್ಲಿ ತನ್ನ ವಿರುದ್ಧದ ವಿಚಾರಣೆಯನ್ನು ಬೆಂಗಳೂರಿಗೆ ವರ್ಗಾಯಿಸುವಂತೆ ಲಲಿತಾ ಲಕ್ಷ್ಮಣನ್ ಸಲ್ಲಿಸಿದ್ದ ಅರ್ಜಿಯನ್ನು ಉಚ್ಚ ನ್ಯಾಯಾಲಯವು ಈ ವರ್ಷದ ಜನವರಿಯಲ್ಲಿ ತಿರಸ್ಕರಿಸಿತ್ತು. 9ನೆ ಪುಟಕ್ಕೆ

Cyan Magenta Yellow Black